ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001

E-Mail: prydirector.edu.sgkar@nic.in

ಸಂಖ್ಯೆ : ಸಿ7(8)ಪ್ರಾಶಿಅ/ಆರ್.ಟಿ.ಇ/ಶುಲ್ಕ ಮರುಪಾವತಿ/2016-17 ದಿನಾಂಕ: 27/04/2017

## : : ಜ್ಞಾಪನ : :

ವಿಷಯ: 2016-17ನೇ ಸಾಲಿನಲ್ಲಿ ಆರ್.ಟಿ.ಇ ಶುಲ್ಕಮರುಪಾವತಿ ಆನ್‌ಲೈನ್ ತಂತ್ರಾಂಶದಲ್ಲಿ ತಪ್ಪು ಮಾಹಿತಿಗಳನ್ನು ದಾಖಲಿಸಿ ಶುಲ್ಕಮರುಪಾವತಿಯಲ್ಲಿ ವ್ಯತ್ಯಾಸವಾಗಿರುವ ಬಗ್ಗೆ ಶುಲ್ಕಮರುಪಾವತಿ ತಂತ್ರಾಶದಲ್ಲಿ ಅಫೀಲು ಮೂಲಕ ಸಲ್ಲಿಸುವ ಕುರಿತು.

ಉಲ್ಲೇಖ:
1. ದಿನಾಂಕ: 09-01-2017ರಂದು ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ಸೂಚನೆ.
2. ದಿನಾಂಕ: 19/12/2016 ರಲ್ಲಿ ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು(ಆಡಳಿತ)ಮತ್ತು ತಾಲ್ಲೂಕು/ವಲಯ ಕ್ಷೇತ್ರಶಿಕ್ಷಣಾಧಿಕಾರಿಗಳೊಂದಿಗೆ ನಡೆದ ರಾಜ್ಯ ಮಟ್ಟದ ವಿಡಿಯೋ ಕಾನ್ಫರೆನ್ಸ್.
3. ದಿನಾಂಕ:25/11/2016 ರಂದು ಮಾನ್ಯ ಸಹನಿರ್ದೇಶಕರು(ಆಡಳಿತ) ಇವರ ಅಧ್ಯಕ್ಷತೆಯಲ್ಲಿ ಖಜಾನೆ ಇಲಾಖೆಯ ಸಹಯೋಗದೊಂದಿಗೆ ನಡೆದ ಖಜಾನೆ-2 ತರಬೇತಿ.
4. ದಿನಾಂಕ:21/11/2016ರಂದು ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು(ಆಡಳಿತ) ಮತ್ತು ತಾಲ್ಲೂಕು/ವಲಯ ಕ್ಷೇತ್ರಶಿಕ್ಷಣಾಧಿಕಾರಿಗಳೊಂದಿಗೆ ನಡೆದ ರಾಜ್ಯ ಮಟ್ಟದ ವಿಡಿಯೋ ಕಾನ್ಫರೆನ್ಸ್.
5. ದಿನಾಂಕ: 16/11/2016 ರಲ್ಲಿ ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದಲ್ಲಿ ನಡೆದ ಜಿಲ್ಲಾ ಮಟ್ಟದ ಆರ್.ಟಿ.ಇ ನೋಡಲ್ ಅಧಿಕಾರಿಗಳು ಮತ್ತು ಪ್ರೋಗ್ರಾಮರ್‌ಗಳ ತರಬೇತಿ.
6. ದಿನಾಂಕ: 14/11/2016 ರಲ್ಲಿ ನಿರ್ದೇಶಕರು (ಪ್ರಾಥಮಿಕ ಶಿಕ್ಷಣ) ಇವರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು (ಆಡಳಿತ) ಮತ್ತು ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳೊಂದಿಗೆ ನಡೆದ ರಾಜ್ಯ ಮಟ್ಟದ ವಿಡಿಯೋ ಕಾನ್ಫರೆನ್ಸ್.
7. ದಿನಾಂಕ:23/01/2017 ರಲ್ಲಿ ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು (ಆಡಳಿತ) ಮತ್ತು ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳೊಂದಿಗೆ ನಡೆದ ರಾಜ್ಯ ಮಟ್ಟದ ವಿಡಿಯೋ ಕಾನ್ಫರೆನ್ಸ್.
8. ದಿನಾಂಕ: 10/02/2017 ರಂದು ಮಾನ್ಯ ಸರ್ಕಾರದ ಪ್ರಧಾನಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇವರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು(ಆಡಳಿತ) ಮತ್ತು ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳೊಂದಿಗೆ ನಡೆದ ರಾಜ್ಯ ಮಟ್ಟದ ವಿಡಿಯೋ ಕಾನ್ಫರೆನ್ಸ್.
9. ದಿನಾಂಕ: 07-04-2017 ರಂದು ಮಾನ್ಯ ಆಯುಕ್ತರು ಹಾಗೂ ರಾಜ್ಯ ಕೊಳಚೆ ನಿರ್ಮೂಲನಾ ಮಂಡಳಿ ಅಧಿಕಾರಿಗಳ ಜೊತೆಯಲ್ಲಿ ನಡೆದ ರಾಜ್ಯ ಮಟ್ಟದ ಉಪನಿರ್ದೇಶಕರು (ಆಡಳಿತ) ಮತ್ತು ಸ್ಥಳಿಯ ನೊಂದಾಯಿತ ಸಂಘ ಸಂಸ್ಥೆಗಳ ಜೊತೆಯಲ್ಲಿ ನಡೆದ ರಾಜ್ಯಮಟ್ಟದ ವಿಡಿಯೋ ಕಾನ್ಫರೆನ್ಸ್.
10. ಉಪನಿರ್ದೇಶಕರು(ಆಡಳಿತ), ಕ್ಷೇತ್ರಶಿಕ್ಷಣಾಧಿಕಾರಿಗಳು, ಶಾಲಾ ಆಡಳಿತ ಮಂಡಳಿಗಳ ಸಂಘ ಸಂಸ್ಥೆಗಳು ಹಾಗೂ ಶಾಲಾ ಆಡಳಿತ ಮಂಡಳಿಗಳಿಂದ ಈ ಕಛೇರಿಯಲ್ಲಿ ಸ್ವೀಕೃತವಾಗಿರುವ ಮನವಿಗಳು.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2016-17ನೇ ಸಾಲಿನ ಆನ್‌ಲೈನ್ ಮುಖಾಂತರ ಶಿಕ್ಷಣ ಹಕ್ಕು ಕಾಯಿದೆ ಸೆಕ್ಷನ್ 12(1)(ಸಿ) ಅಡಿ ದಾಖಲಾದ ಮಕ್ಕಳ ಶುಲ್ಕಮರುಪಾವತಿ ಮಾಡುವ ಬಗ್ಗೆ ಉಲ್ಲೇಖಗಳಂತೆ ಅನುಸರಿಸಬೇಕಾದ ಕ್ರಮಗಳ ಬಗ್ಗೆ ರಾಜ್ಯ ಹಂತದಲ್ಲಿ ವಿವಿಧ ದಿನಾಂಕಗಳಲ್ಲಿ ತರಬೇತಿ ನೀಡಲಾಗಿದೆ.

ಆದಾಗ್ಯೂ ತಮ್ಮ ಆಡಳಿತ ವ್ಯಾಪ್ತಿಯಲ್ಲಿ ಬರುವ ಶಾಲೆಗಳಿಗೆ ಸೂಕ್ತ ಮಾಹಿತಿ ಒದಗಿಸದ ಕಾರಣ ಶುಲ್ಕಮರುಪಾವತಿ ಸಾಫ್ಟ್‌ವೇರ್‌ನಲ್ಲಿ ಕೆಲವು ಶಾಲೆಗಳು ತಪ್ಪು ಮಾಹಿತಿಗಳನ್ನು ನಮೂದಿಸಿರುತ್ತಾರೆ. ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು ಜಾಗರೂಕತೆಯಿಂದ ಪರಿಶೀಲನೆ ಮಾಡದೆ ತಂತ್ರಾಂಶದಲ್ಲಿ ಮುಂದಿನ ಹಂತಕ್ಕೆ ಸಲ್ಲಿಸಿರುವ ಕಾರಣ ಕೆಲವು ಶಾಲೆಗಳಿಗೆ ಕಡಿಮೆ ಮೊತ್ತ ಬಂದಿರುತ್ತದೆ ಎಂಬುದಾಗಿ ಉಲ್ಲೇಖ (10) ಉಪನಿರ್ದೇಶಕರು (ಆಡಳಿತ), ಕ್ಷೇತ್ರಶಿಕ್ಷಣಾಧಿಕಾರಿಗಳು, ಶಾಲಾ ಆಡಳಿತ ಮಂಡಳಿಗಳು ಹಾಗೂ ಇ-ಮೇಲ್ ಮುಖಾಂತರ ಮನವಿಗಳನ್ನು ಸಲ್ಲಿಸಿರುತ್ತಾರೆ.

ಉಲ್ಲೇಖ(9)ರ ವಿಡಿಯೋ ಕಾನ್ಫರೆನ್ಸ್ ನಲ್ಲಿ ಸೂಚಿಸಿರುವಂತೆ ಎಲ್ಲಾ ಮನವಿಗಳನ್ನು ಶುಲ್ಕಮರುಪಾವತಿ ಸಾಫ್ಟ್‌ವೇರ್‌ನಲ್ಲಿ ಹೊಸದಾಗಿ ಸೃಜಿಸಲಾಗುತ್ತಿರುವ ಅಪೀಲು ಮುಖಾಂತರ ಆನ್‌ಲೈನ್‌ನಲ್ಲಿ ಸಲ್ಲಿಸಿದಲ್ಲಿ ಮಾತ್ರ ಪರಿಗಣಿಸಲಾಗುತ್ತದೆ. ಸದರಿ ಸಾಫ್ಟ್‌ವೇರ್ ಅನ್ನು ಶೀಘ್ರದಲ್ಲಿ ಬಿಡುಗಡೆ ಮಾಡಲಾಗುವುದು.

**ಆದುದರಿಂದ ಉಲ್ಲೇಖ(10) ರಂತೆ ಸಲ್ಲಿಸಿರುವ ಉಪನಿರ್ದೇಶಕರು(ಆಡಳಿತ), ಕ್ಷೇತ್ರಶಿಕ್ಷಣಾಧಿಕಾರಿಗಳು, ಶಾಲಾ ಆಡಳಿತ ಮಂಡಳಿಗಳು ಹಾಗೂ ಇ-ಮೇಲ್ ಮುಖಾಂತರ ಬಂದಿರುವ ಶುಲ್ಕಮರುಪಾವತಿಗೆ ಸಂಬಂಧಿಸಿದ ಎಲ್ಲಾ ಮನವಿಗಳನ್ನು ಕಡತಗೊಳಿಸಲಾಗಿದೆ.**

ಶುಲ್ಕಮರುಪಾವತಿ ತಂತ್ರಾಂಶದಲ್ಲಿನ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕು / ವಲಯಗಳ ಕ್ರೋಢೀಕೃತ ಮಾಹಿತಿಯನ್ನು ಉಪನಿರ್ದೇಶಕರು(ಆಡಳಿತ) ಇವರ ಮುಖಾಂತರ ಒಂದೇ ಪತ್ರದಲ್ಲಿ ತಂತ್ರಾಂಶದಲ್ಲಿ ಆಗುತ್ತಿರುವ ಸಮಸ್ಯೆಗಳ ವಿವರಗಳೊನ್ನೊಳಗೊಂಡಂತೆ ವಿವರವಾದ ವರದಿ ಸಲ್ಲಿಸಲು ಸೂಚಿಸಲಾಗಿದೆ.

ಮೇಲ್ಕಂಡ ಎಲ್ಲ ಅಂಶಗಳ ಬಗ್ಗೆ ಮತ್ತೊಮ್ಮೆ ಪುನರಾವಲೋಕನ ಮಾಡಿಕೊಂಡು ಅಗತ್ಯ ಮಾಹಿತಿಗಳನ್ನು ನಿಗಧಿಪಡಿಸಿರುವ ಶುಲ್ಕಮರುಪಾವತಿ ಸಾಫ್ಟ್‌ವೇರ್‌ನಲ್ಲಿ ಅಪೀಲು ಮೂಲಕವೇ ಸಲ್ಲಿಸಿ ಪರಿಹಾರ ಕಂಡುಕೊಳ್ಳಲು ಸೂಚಿಸಲಾಗಿದೆ.

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ,

**ರವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ ಇ-ಮೇಲ್ ಮುಖಾಂತರ
2. ರಾಜ್ಯದ ಎಲ್ಲಾ ವಲಯ/ತಾಲ್ಲೂಕುಗಳ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ ಇ-ಮೇಲ್ ಮುಖಾಂತರ.
3. ರಾಜ್ಯ ಹಂತದ ಆರ್.ಟಿ.ಇ ನೋಡಲ್ ಅಧಿಕಾರಿಗಳಿಗೆ
4. ಹಿರಿಯ ಸಹಾಯಕ ನಿರ್ದೇಶಕರು, ಪ್ರಾಥಮಿಕ ಅನುದಾನ ಶಾಖೆ, ಇವರಿಗೆ ರಾಜ್ಯದಲ್ಲಿರುವ ಎಲ್ಲಾ ಜಿಲ್ಲೆಗಳಿಂದ ಶಾಲೆಗಳ ಮಾನ್ಯತೆ ಬಗ್ಗೆ ಅಗತ್ಯ ದಾಖಲೆಗಳನ್ನು ಪಡೆದು ಮಾನ್ಯತೆ ನವೀಕರಣ ಸಂಬಂಧ ಅಗತ್ಯ ಕ್ರಮವಹಿಸುವುದಕ್ಕಾಗಿ.

ಪ್ರತಿಯನ್ನು:

1. ಜಂಟಿ ನಿರ್ದೇಶಕರು (ಆಡಳಿತ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
2. ಹಿರಿಯ ಸಹಾಯಕ ನಿರ್ದೇಶಕರು, ಇ-ಗವರ್ನೆನ್ಸ್ ವಿಭಾಗ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
3. ಕಛೇರಿ ಪ್ರತಿ.